ವಿಳಾಸ : ಗುಜಖಿಇಲು
ದೂರವಾಣಿ ಸಂಖ್ಯೆ :2419440/2419361
¥sÁåPñ ¸ÀASÉå : 0821- 2419363/2419301

ಇಮೇಲ್ :registrar@[illegible]
ವೆಬ್ ಸೈಟ್: www.[illegible]

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಮೈಸೂರು–570 005.

ವಿಷಯ: 2017–18ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಡಾ.ಪ್ರತಿಭಾ.ಕೆ.ಪಿಯವರಿಗೆ ಪೂರ್ಣಾವಧಿ ಕಾರ್ಯಭಾರ ನೀಡಿ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ, ದಿನಾಂಕ 19.07.2017 ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿ.
2. ವಿಶ್ವವಿದ್ಯಾನಿಲಯದ ಪ್ರಕಟಣೆ ಸಂಖ್ಯೆ: ಇಟಿ.11/92/2017–18 ದಿನಾಂಕ 30–06–2017.
3. ಈ ಕಛೇರಿ ಆದೇಶ ಸಂಖ್ಯೆಯ ದಿನಾಂಕ 07.08.2017
4. ವಿಭಾಗಾಧ್ಯಕ್ಷರ ಮನವಿಪತ್ರ ಸಂಖ್ಯೆ: ಎಂ.ಜಿ.ಜಿ/187/2017–18 ದಿನಾಂಕ 14.08.2017.

ಪ್ರಸ್ತಾವನೆ:

ವಿಶ್ವವಿದ್ಯಾನಿಲಯದ ಜೆನಿಟಿಕ್ಸ್ ಮತ್ತು ಜೆನೋಮಿಕ್ಸ್ ಅಧ್ಯಯನ ವಿಭಾಗದಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸುವ ಸಂಬಂಧ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಸಂದರ್ಶನ ನಡೆಸಿ ಆಯ್ಕೆ ಸಮಿತಿಯು ಇತರೆ ಅಭ್ಯರ್ಥಿಗಳೊಂದಿಗೆ ಪ್ರತಿಭಾ.ಕೆ.ಪಿ ಎಂಬುವರನ್ನು ಆಯ್ಕೆ ಮಾಡಿ, ಸದರಿಯವರಿಗೆ 08ಗಂಟೆಗಳ ಬೋಧನಾ ಕಾರ್ಯಭಾರ ನೀಡಿ ಆದೇಶ ನೀಡಲಾಗಿತ್ತು. (ಉಲ್ಲೇಖ–3)

ಮುಂದುವರಿಕೆಯಗಿ, ಡಾ.ಎನ್.ಬಿ.ರಾಮಚಂದ್ರ, ಅಧ್ಯಕ್ಷರು, ಜೆನಿಟಿಕ್ಸ್ ಮತ್ತು ಜೆನೋಮಿಕ್ಸ್ ಅಧ್ಯಯನ ವಿಭಾಗ, ಮಾನಸ ಗಂಗೋತ್ರಿ, ಮೈಸೂರು ಇವರು ಮನವಿ ಪತ್ರವನ್ನು ಸಲ್ಲಿಸಿ, ವಿಭಾಗದಲ್ಲಿ Open Elective ವಿಷಯಕ್ಕೆ, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, Open Elective ವಿಷಯದ ಪಾಯೋಗಿಕ ತರಗತಿಗಳನ್ನು ಎರಡು ಬ್ಯಾಚ್ ಮಾಡಲಾಗಿದ್ದು, ಅದರಂತೆ 04ಗಂಟೆಗಳ ಹೆಚ್ಚಿನ ಕಾರ್ಯಭಾರವಿರುತ್ತದೆ ಎಂದು ತಿಳಿಸುತ್ತಾ, ಈ ಹೆಚ್ಚಿನ ಕಾರ್ಯಭಾರವನ್ನು ಹೊಂದಾಣಿಕೆ ಮಾಡಲು, ಡಾ.ಪ್ರತಿಭಾ.ಕೆ.ಪಿಯವರಿಗೆ 12ಗಂಟೆಗಳ ಕಾರ್ಯಭಾರ ನೀಡಿರುವುದಾಗಿ ತಿಳಿಸುತ್ತಾರೆ. ಆದ್ದರಿಂದ ಡಾ.ಪ್ರತಿಭಾ.ಕೆ.ಪಿರವರಿಗೆ ಪೂರ್ಣಾವಧಿ (12ಗಂಟೆಗಳ) ಕಾರ್ಯಭಾರದ ಆದೇಶವನ್ನು ನೀಡಬೇಕೆಂದು ಕೋರಿದ್ದರು.

ಈ ಹಿನ್ನಲೆಯಲ್ಲಿ ಕೆಳಗಿನ ಆದೇಶ.

* * * *

## ಆದೇಶ ಸಂಖ್ಯೆ: ಇಟ13/203/2017–18 ದಿನಾಂಕ 28ನೇ ಆಗಸ್ಟ್ 2017

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2017–18ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಜೆನಿಟಿಕ್ಸ್ ಮತ್ತು ಜೆನೋಮಿಕ್ಸ್ ಅಧ್ಯಯನ ವಿಭಾಗದಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| Prathibha KP #45, 9th main, 12cross, Chamundeshwari railway layout, Mysore | Genetics & Genomics | 12 | DOS in Genetics & Genomics | 22500/– |

22/09/17

ಪು.ತಿ.ನೊ

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ' ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2017-18ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

<u>ಮುಚ್ಚಳಿಕೆ</u>

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2017-18ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ' ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

**ಉಲ್ಲೇಖ (3) ಆದೇಶವನ್ನು ಹಿಂಪಡೆಯಲಾಗಿದೆ.**

ಆದೇಶದ ಮೇರೆಗೆ

ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ: ಅಧ್ಯಕ್ಷರು, ಜೆನಿಟಿಕ್ಸ್ ಮತ್ತು ಜೆನೊಮಿಕ್ಸ್ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಮುಖಾಂತರ.